# 1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.

## ಸಿಸಿ ಸಂಖ್ಯೆ 1018/2025

ಪಿರ್ಯಾದುದಾರರು : ಬಿಳಿಗೆರೆ ಪೊಲೀಸ್ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು:

ಮಂಜುನಾಥ ಬಿ ಸಿ ಬಿನ್ ಚೆನ್ನಸಾವಮಿ 33 ವರ್ಷ
ವಾಸಃಬಾನಹಳ್ಳಿ ಗ್ರಾಮ, ಚಾಮರಾಜನಗರ ತಾಲ್ಲೂಕು

*** *** ***

ಆಪಾದನೆ

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿನಾಂಕ:28.03.2025 ರಂದು ಬೆಳಗ್ಗೆ 07.30 ಗಂಟೆ ಸಮಯದಲ್ಲಿ ನಂಜನಗೂಡು ತಾಲ್ಲೂಕು ಬಿಳಿಗೆರೆ ಠಾಣಾ ಸರಹದ್ದು ಆಲತ್ತೂರು ಗ್ರಾಮದ ಸರ್ಕಲ ಬಳಿ ಹೊಸಕೋಟೆ ಸುತ್ತೂರು ರಸ್ತೆಯಲ್ಲಿ ಚಾಸಾ.1 ರವರು ತಮ್ಮ ಬಾಬ್ತು ಬೈಸಿಕಲ್ ನಲ್ಲಿ ಸುತ್ತೂರು ಕಡೆಗೆ ಹೋಗುತ್ತಿರುವಾಗ ಹೊಸಕೋಟೆ ಕಡೆಯಿಂದ ತುಂಗೇಶ ರವರ ಜಮೀನಿನ ಬಳಿ ಆರೋಪಿತರಾದ ನೀವು ಕೆಎ-10-ಇ ಹೆಚ್ -1931 ಹೋಂಡಾ ಲಿಯೋ ಬೈಕನ್ನು ಅತಿ ವೇಗ ಮತ್ತು ಅಜಾಗೂರುಕತೆಯಿಂದ ಚಾಲನೆ ಮಾಡಿಕೊಂಡು ಹೋಗಿ ಚಾಸಾ.1 ರವರ ಬೈಸಿಕಲ್ ಗೆ ಹಿಂದುಗಡೆಯಿಂದ ಬಂದು ಡಿಕ್ಕಿ ಮಾಡಿ ಅಪಘಾತ ಪಡಿಸಿರುತ್ತೀರಿ. ಆದ್ದರಿಂದ

ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದಿಂದ ಚಾಸಾ.1 ರವರು ಕೆಳಕ್ಕೆ ಬಿದ್ದಿದ್ದು, ಇದರಿಂದ ಚಾಸಾ.1 ರವರ ಎಡಭಾಗದ ಭುಜದ ಮೂಳೆ ಮುರಿದು ತೀವ್ರ ಸ್ವರೂಪದ ಗಾಯವಾಗಿರುತ್ತದೆ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.125 (ಬಿ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದಿಂದ ಚಾಸಾ.1 ರವರು ಕೆಳಕ್ಕೆ ಬಿದ್ದಿದ್ದು, ಇದರಿಂದ ಚಾಸಾ.1 ರವರ ಎಡಭಾಗದ ತೋಳಿಗೆ ಸಾಮಾನ್ಯ ಸ್ವರೂಪದ ಗಾಯವಾಗಿರುತ್ತದೆ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.125 (ಎ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

1. **ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**
   **ಉಃ**

2. **ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**
   **ಉಃ**

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 12.01.2026 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,
ನಂಜನಗೂಡು.